ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ: DEPARTMENT / SUBJECT: B.B.M.P
ಪತ್ರಿಕೆಯ ಹೆಸರು : NAME OF THE NEWS PAPER: [illegible]
ದಿನಾಂಕ : DATE : 3.12.19

ನಾಮಪತ್ರ ಸಲ್ಲಿಸದಿರಲು ಸದಸ್ಯರ ನಿರ್ಧಾರ

# ನಾಳೆ ಬಿಬಿಎಂಪಿ ಸ್ಥಾಯಿ ಸಮಿತಿ ಎಲೆಕ್ಷನ್ ಡೌಟು

ಸತೀಶ್ ಕೆ.ಬಳ್ಳಾರಿ ಬೆಂಗಳೂರು

ಶಾಸಕರು ಉಪಚುನಾವಣೆ ಪ್ರಚಾರದಲ್ಲಿ ನಿರತರಾಗಿದ್ದಾರೆಂಬ ಕಾರಣಕ್ಕೆ ಬುಧವಾರ (ಡಿ.4) ನಿಗದಿಯಾಗಿದ್ದ ಬಿಬಿಎಂಪಿ ಸ್ಥಾಯಿ ಸಮಿತಿಗಳ ಚುನಾವಣೆಯಿಂದ ಹೊರಗುಳಿಯಲು ಪಾಲಿಕೆ ಸದಸ್ಯರು ತೀರ್ಮಾನಿಸಿದ್ದಾರೆ.

> ವಿಧಾನಸಭಾ ಉಪ ಚುನಾವಣೆ ನಮಗೆ ಮುಖ್ಯ. ಹೀಗಾಗಿ ನಮ್ಮ ಅಭ್ಯರ್ಥಿಗಳು ನಾಮಪತ್ರ ಸಲ್ಲಿಕೆ ಮಾಡದಿರಲು ತೀರ್ಮಾನಿಸಿದ್ದಾರೆ.
>
> ಬಿಬಿಎಂಪಿ ವಿರೋಧ ಪಕ್ಷದ ನಾಯಕ

ಬಿಬಿಎಂಪಿ ವ್ಯಾಪ್ತಿಯ 4 ವಿಧಾನಸಭಾ ಕ್ಷೇತ್ರಗಳಲ್ಲಿ ಡಿ.5ಕ್ಕೆ ಉಪ ಚುನಾವಣೆ ನಡೆಯುವುದನ್ನು ಮುಂದಿಟ್ಟುಕೊಂಡು 198 ವಾರ್ಡ್‌ಗಳ ಸದಸ್ಯರು ಚುನಾವಣೆಯಲ್ಲಿ ಭಾಗವಹಿಸದಿರಲು ನಿರ್ಧರಿಸಿದ್ದಾರೆ. ಆಡಳಿತ ವಿಕೇಂದ್ರೀಕರಣದ ಆಶಯಕ್ಕೆ ಇದು ಪೆಟ್ಟು ನೀಡುವಂತಿದೆ ಎಂಬ ಆರೋಪ ಕೇಳಿಬಂದಿದೆ.

ಬಿಬಿಎಂಪಿಯಲ್ಲಿ ಬಿಜೆಪಿಯ 101, ಕಾಂಗ್ರೆಸ್ 76, ಜೆಡಿಎಸ್ 14 ಹಾಗೂ 7 ವಾರ್ಡ್‌ಗಳಲ್ಲಿ ಪಕ್ಷೇತರರು ಆಯ್ಕೆಯಾಗಿದ್ದಾರೆ. ಅ.1ಕ್ಕೆ ಮೇಯರ್ ಹಾಗೂ ಉಪಮೇಯರ್ ಚುನಾವಣೆ ಜತೆಗೇ ಸ್ಥಾಯಿ ಸಮಿತಿ ಚುನಾವಣೆ ನಡೆಯಬೇಕಿತ್ತಾದರೂ ಸದಸ್ಯರು ನ್ಯಾಯಾಲಯದಿಂದ ತಡೆಯಾಜ್ಞೆ ತಂದಿದ್ದರಿಂದಾಗಿ ಮುಂದೂಡಲಾಗಿತ್ತು. ಅದರಂತೆ ಡಿ.4 ರಂದು ಚುನಾವಣೆ ನಿಗದಿಯಾಗಿದೆ.

12 ಸಮಿತಿಗಳಿಗೆ ಸದಸ್ಯರ ಆಯ್ಕೆಗೆ ಬಿಬಿಎಂಪಿ ಸದಸ್ಯರು, ಅದರ ವ್ಯಾಪ್ತಿ ಶಾಸಕರು, ಸಂಸದರು, ರಾಜ್ಯಸಭೆ ಮತ್ತು ಲೋಕಸಭೆ ಸದಸ್ಯರೂ ಮತದಾರರು. ಚುನಾವಣೆಯಲ್ಲಿ ಸ್ಪರ್ಧೆ ನಡೆದರೆ ಎಲ್ಲರಿಗೂ ಮತದಾನ ಮಾಡುವ ಅಧಿಕಾರವಿದೆ. ಆಡಳಿತ ಮತ್ತು ಪ್ರತಿಪಕ್ಷದ ನಡುವೆ ಹೊಂದಾಣಿಕೆ ಮೂಲಕ 'ನೇಮಕ' ಆಗುತ್ತದೆ. ಪ್ರತಿ ಸ್ಥಾಯಿಸಮಿತಿಯಲ್ಲಿ ಆಡಳಿತ ಪಕ್ಷದ ಸದಸ್ಯರು ಹೆಚ್ಚು(6-7) ಇರುವಂತೆ ಹಾಗೂ ಉಳಿದ ಸ್ಥಾನಕ್ಕೆ ಪ್ರತಿಪಕ್ಷಗಳ ಸದಸ್ಯರನ್ನು ಪರಸ್ಪರ ಮಾತುಕತೆ ಮೂಲಕ ಅಂತಿಮಗೊಳಿಸಿಕೊಳ್ಳಲಾಗುತ್ತದೆ. ಚುನಾವಣೆ ದಿನಕ್ಕೂ ಮೊದಲೇ ಈ ಹೆಸರುಗಳು ನಿರ್ಧಾರವಾಗುವ ಕಾರಣಕ್ಕೆ ಬಹುತೇಕ ಸಂದರ್ಭಗಳಲ್ಲಿ ಶಾಸಕರು, ಸಂಸದರು ಚುನಾವಣೆಯಲ್ಲಿ ಭಾಗವಹಿಸುವುದಿಲ್ಲ.

ಆದರೆ ಬಿಬಿಎಂಪಿ ವ್ಯಾಪ್ತಿಯ 4 ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆ ಮುಂದಿಟ್ಟುಕೊಂಡು ಸ್ಥಾಯಿ ಸಮಿತಿ ಚುನಾವಣೆಗೆ ಸ್ಪರ್ಧೆ ಮಾಡದಿರಲು ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ನಾಯಕರು ನಿರ್ಧರಿಸಿದ್ದಾರೆ. ಉಪಚುನಾವಣೆಯಲ್ಲಿ ಗೆಲ್ಲುವುದು ಮುಖ್ಯವಾದ್ದರಿಂದ ಹೊರಗುಳಿಯಲು ನಿರ್ಧಾರ ಮಾಡಿರುವುದಾಗಿ ತಿಳಿಸಿದ್ದಾರೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ನಮ್ಮ ಬೆಂಗಳೂರು ಪ್ರತಿಷ್ಠಾನದ ಪ್ರಧಾನ ವ್ಯವಸ್ಥಾಪಕ ಹರೀಶ್ ಕುಮಾರ್, ಪಾಲಿಕೆ ಸದಸ್ಯರು ಪ್ರಜಾಪ್ರಭುತ್ವದ ಮಾರ್ಗದಲ್ಲಿ ನಡೆಯದೆ ಜನರ ಆಶೋತ್ತರಗಳನ್ನು ಗಾಳಿಗೆ ತೂರುವ ಕೆಲಸ ಮಾಡುತ್ತಿದ್ದಾರೆ. ಅವರ ಹಿತಾಸಕ್ತಿ ಮುಂದಿಟ್ಟುಕೊಂಡು ಸ್ಥಾಯಿ ಸಮಿತಿ ಚುನಾವಣೆಗೆ ಭಾಗವಹಿಸದಿದ್ದರೆ ಜನರಿಗೆ ಮಾಡುವ ಮೋಸ ಎಂದಿದ್ದಾರೆ.

> ಉಪಚುನಾವಣೆ ರಾಜ್ಯದ ರಾಜಕೀಯ ಭವಿಷ್ಯದ ಮೇಲೆ ಪರಿಣಾಮ ಬೀರುವುದರಿಂದ ಗಂಭೀರವಾಗಿ ಪರಿಗಣಿಸಿದ್ದೇವೆ. ಆಯಾ ವಾರ್ಡ್‌ಗಳ ಸದಸ್ಯರು ಮನೆ ಮನೆ ತೆರಳಿ ನಮ್ಮ ಅಭ್ಯರ್ಥಿಗೆ ಮತ ಕೇಳಲು ಹೋಗುತ್ತಾರೆ. ಹೀಗಾಗಿ ಸ್ಥಾಯಿ ಸಮಿತಿ ಚುನಾವಣೆಗೆ ನಾಮಪತ್ರ ಸಲ್ಲಿಸದಿರಲು ನಿರ್ಧರಿಸಿದ್ದೇವೆ.
>
> ಬಿಬಿಎಂಪಿ ಆಡಳಿತ ಪಕ್ಷದ ನಾಯಕ

> ಚುನಾವಣಾ ಆಯೋಗದ ತೀರ್ಮಾನದಂತೆ ಬಿಬಿಎಂಪಿ ಸ್ಥಾಯಿ ಸಮಿತಿ ಚುನಾವಣೆಯನ್ನು ಡಿ.4 ರಂದು ನಡೆಸುವುದಾಗಿ ನ.21 ರಂದು ಘೋಷಣೆ ಮಾಡಿದ್ದೇವೆ. ನೀತಿ ಸಂಹಿತೆ ಅಡ್ಡಿಯಾಗುತ್ತದೆ ಎಂಬ ಕಾರಣದಿಂದ ಸ್ಥಳವನ್ನೂ ಬದಲಾಯಿಸಲಾಗಿದೆ. ನಾಮಪತ್ರ ಸಲ್ಲಿಕೆಯಾದರೆ ಚುನಾವಣೆ ನಡೆಯುತ್ತದೆ. ಇಲ್ಲವೆಂದರೆ ಕನಿಷ್ಠ 10 ದಿನ ಮುಂದೂಡಲಾಗುವುದು.
>
> ಪ್ರಾದೇಶಿಕ ಆಯುಕ್ತ